# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 744 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ** | : | 20-12-2021 |
| **ಉತ್ತರಿಸುವ ಸಚಿವರು** | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

* * *

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಹಾಸನ ಜಿಲ್ಲೆಯಲ್ಲಿ ಆಯುಷ್ಮಾನ್ ಆರೋಗ್ಯ ಯೋಜನೆಯಡಿ ಗುರುತಿನ ಚೀಟಿಯನ್ನು ನೀಡುವ ಅಭಿಯಾನವನ್ನು ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ ಈ ಅಭಿಯಾನದಲ್ಲಿ ಎಷ್ಟು ಜನ ಫಲಾನುಭವಿಗಳನ್ನು ಗುರುತಿಸಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು) | ಹೌದು.<br>ಹಾಸನ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಗುರುತಿನ ಚೀಟಿಗಳನ್ನು ವಿತರಿಸುವ ಕಾರ್ಯಕ್ರಮವನ್ನು ಈಗಾಗಲೇ ಕೈಗೊಳ್ಳಲಾಗಿದೆ. ಈ ಅಭಿಯಾನದಡಿ ಈ ಕೆಳಕಂಡಂತೆ ಫಲಾನುಭವಿಗಳನ್ನು ಗುರುತಿಸಲಾಗಿದೆ.<br>ಸರ್ಕಾರಿ ಆಸ್ಪತ್ರೆಗಳು: 1,34,651<br>ಸೇವಾ ಸಿಂಧು ಕೇಂದ್ರ: 4,25,110<br>ಬಾಪೂಜಿ ಸೇವಾ ಕೇಂದ್ರ: 17,261<br>ಕರ್ನಾಟಕ ಒನ್: 29,844<br>ಐ ಟಿ ಐ ಇ-ಸೇವಾ ಕೇಂದ್ರ: 315<br>ಒಟ್ಟು: 6,07,181 |
| ಆ | ಈ ಅಭಿಯಾನದಲ್ಲಿ ಗುರುತಿಸಲಾದ ಫಲಾನುಭವಿಗಳಿಗೆ ಗುರುತಿನ ಚೀಟಿಗಳನ್ನು ವಿತರಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ; ಬಾಕಿ ಉಳಿದಿರುವ ಫಲಾನುಭವಿಗಳಿಗೆ ಯಾವ ಕಾಲ ಮಿತಿಯೊಳಗೆ ವಿತರಿಸಲಾಗುವುದು; (ಫಲಾನುಭವಿಗಳ ವಿವರದೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು) | ಈ ಅಭಿಯಾನದಲ್ಲಿ ಗುರುತಿಸಲಾದ ಫಲಾನುಭವಿಗಳಿಗೆ ಗುರುತಿನ ಚೀಟಿಗಳನ್ನು ವಿತರಿಸಲಾಗಿದೆ.<br>ಈವರೆಗೆ ಗುರುತಿಸಲಾದ 6,07,181 ಫಲಾನುಭವಿಗಳಿಗೆ ಗುರುತಿನ ಚೀಟಿಗಳನ್ನು ವಿತರಿಸಲಾಗಿದೆ. ಗುರುತಿನ ಚೀಟಿ ನೀಡುವ ಕಾರ್ಯಕ್ರಮ ಪ್ರತಿನಿತ್ಯ ನಡೆಯುವ ಕಾರ್ಯಕ್ರಮವಾಗಿರುತ್ತದೆ. |
| ಇ | ಆಯುಷ್ಮಾನ್ ಗುರುತಿನ ಚೀಟಿಗಳನ್ನು ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು; ಇದರಡಿ ಫಲಾನುಭವಿಗಳು ಯಾವ ಯಾವ ಚಿಕಿತ್ಸೆಗಳನ್ನು ಎಲ್ಲೆಲ್ಲಿ ಪಡೆಯಬಹುದಾಗಿದೆ; (ಸಂಪೂರ್ಣ ವಿವರ ನೀಡುವುದು) | ಆಯುಷ್ಮಾನ್ ಗುರುತಿನ ಚೀಟಿಗಳನ್ನು ನೀಡಲು ಆಧಾರ್ ಕಾರ್ಡ್ ಹಾಗೂ ಬಿ.ಪಿ.ಎಲ್. ಅಥವಾ ಎ.ಪಿ.ಎಲ್. ಕಾರ್ಡ್‌ಗಳನ್ನು ಹೊಂದಿರತಕ್ಕದ್ದು.<br>ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ಅರ್ಹ ರೋಗಿಗಳಿಗೆ (ಬಿಪಿಎಲ್) ರೂ.5.00 ಲಕ್ಷಗಳು ಮತ್ತು ಸಾಮಾನ್ಯ ರೋಗಿಗಳಿಗೆ (ಎಪಿಎಲ್) ಸಹ-ಪಾವತಿ ಆಧಾರದ ಮೇಲೆ ಸರ್ಕಾರಿ ಪ್ಯಾಕೇಜ್ ದರದ ಶೇ.30 ರಷ್ಟು ಅಂದರೆ ರೂ.1.50 ಲಕ್ಷಗಳು ವಾರ್ಷಿಕ ಮಿತಿ ಪ್ರತಿ ಕುಟುಂಬಕ್ಕೆ ಇರುತ್ತದೆ. |

50

| | | |
|---|---|---|
| | | ಸಂಯೋಜಿತ ಯೋಜನೆಯಲ್ಲಿ 1650 ಚಿಕಿತ್ಸಾ ವಿಧಾನಗಳು ಒಳಗೊಂಡಿರುತ್ತವೆ.<br>• ಪ್ರಾಥಮಿಕ ಚಿಕಿತ್ಸೆಗಳು ಮತ್ತು ಸರಳ ದ್ವಿತೀಯ ಹಂತದ 291 ಚಿಕಿತ್ಸೆಗಳನ್ನು ಸಾರ್ವಜನಿಕ ಆರೋಗ್ಯ ಸಂಸ್ಥೆಗಳಲ್ಲಿ ಮಾತ್ರ ನೀಡಲಾಗುತ್ತದೆ.<br>• ಕ್ಲಿಷ್ಟಕರ ದ್ವಿತೀಯ ಹಂತದ 254 ಚಿಕಿತ್ಸಾ ವಿಧಾನಗಳು, ತೃತೀಯ ಹಂತದ 900 ಚಿಕಿತ್ಸಾ ವಿಧಾನಗಳು, 169 ತುರ್ತು ಚಿಕಿತ್ಸಾ ವಿಧಾನಗಳು ಮತ್ತು 36 ಉಪ-ಚಿಕಿತ್ಸಾ ವಿಧಾನಗಳು ಸಾರ್ವಜನಿಕ ಆರೋಗ್ಯ ಸಂಸ್ಥೆಗಳು ಮತ್ತು ನೋಂದಾಯಿತ ಖಾಸಗಿ ಆಸ್ಪತ್ರೆಗಳಲ್ಲಿ ಒದಗಿಸಲಾಗುತ್ತದೆ.<br>• ಕ್ಲಿಷ್ಟಕರ ದ್ವಿತೀಯ ಹಂತದ ಚಿಕಿತ್ಸೆಗಳು ಮತ್ತು ತೃತೀಯ ಹಂತದ ಚಿಕಿತ್ಸೆಗಳಿಗೆ ಸಾರ್ವಜನಿಕ ಆರೋಗ್ಯ ಸಂಸ್ಥೆಗಳಿಂದ ರೆಫರಲ್ ಪಡೆಯಬೇಕಿರುತ್ತದೆ.<br>• 169 ತುರ್ತು ಚಿಕಿತ್ಸೆಗಳಿಗೆ ಯಾವುದೇ ರೆಫರಲ್ ಇಲ್ಲದೆ ನೇರವಾಗಿ ರೋಗಿಯು ಇಚ್ಚಿಸುವ ನೋಂದಾಯಿತ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯಬಹುದು.<br>ಈ ಯೋಜನೆಯಡಿ 2903 ಸರ್ಕಾರಿ ಆಸ್ಪತ್ರೆಗಳು ಹಾಗೂ 561 ಖಾಸಗಿ ಆಸ್ಪತ್ರೆಗಳು ಈ ರೀತಿ ಒಟ್ಟಾರೆ 3464 ಆಸ್ಪತ್ರೆಗಳು ನೊಂದಾಯಿಸಲ್ಪಟ್ಟಿವೆ.<br>ಆಯುಷ್ಮಾನ್ ಭಾರತ್- ಆರೋಗ್ಯ ಕರ್ನಾಟಕ ಯೋಜನೆಯ ಚಿಕಿತ್ಸಾ ವಿಧಾನಗಳು ಮತ್ತು ನೊಂದಾಯಿತ ಆಸ್ಪತ್ರೆಗಳ ವಿವರವು ಈ ಕೆಳಕಂಡ ಅಂತರ್ಜಾಲ ವಿಳಾಸದಲ್ಲಿ ಲಭ್ಯವಿದೆ.<br>www.arogya.karnataka.gov.in/sast<br>www.sast.karnataka.gov.in |
| ಈ | ಕೇಂದ್ರ ಮತ್ತು ರಾಜ್ಯ ಸರ್ಕಾರ ಜಾರಿಗೊಳಿಸಿರುವ ಈ ಯೋಜನೆಯನ್ನು ಸಾರ್ವಜನಿಕರಿಗೆ ತಲುಪಿಸುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಗುರುತಿಸಿರುವ ಎಲ್ಲಾ ಫಲಾನುಭವಿಗಳಿಗೆ ಸರಿಯಾದ ಸಮಯಕ್ಕೆ ಇದರ ಪ್ರಯೋಜನ ಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಇಲ್ಲ.<br>ಉದ್ಭವಿಸುವುದಿಲ್ಲ. |

ಸಂಖ್ಯೆ: ಆಕುಕ 744 ಚುರಪ್ರ 2021

(ಡಾ: ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು